ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ನೀಡುತ್ತಿರುವ ಸವಲತ್ತುಗಳು ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

300 (357) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಯಾವ ರೀತಿಯ ಕೈಗಾರಿಕೆಗಳನ್ನು ಸಣ್ಣ ಕೈಗಾರಿಕೆಗಳೆಂದು ಪರಿಗಣಿಸಲಾಗುವುದು; ಅವುಗಳನ್ನು ಸ್ಥಾಪನೆ ಮಾಡಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು; ಹಾಗೂ ಅವುಗಳನ್ನು ಪ್ರೋತ್ಸಾಹಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಆ) ಹಾಸನ ಜಿಲ್ಲೆಯಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿವೆ; ಈ ಕೈಗಾರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರೆಷ್ಟು; ಈ ಕೈಗಾರಿಕೆಗಳು ನೌಕರರಿಗೆ ಒದಗಿಸುತ್ತಿರುವ ಸೌಲಭ್ಯಗಳೇನು; ಕೈಗಾರಿಕೆಗಳ ವಿಳಾಸದೊಂದಿಗೆ ಮಾಹಿತಿ ನೀಡುವುದು;

(ಇ) ಈ ಕೈಗಾರಿಕೆಗಳಿಗೆ ಮತ್ತು ನೌಕರರಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳೇನು; ಕಳೆದ 3 ವರ್ಷಗಳಲ್ಲಿ ಈ ಕೈಗಾರಿಕೆಗಳಿಂದ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು? (ಕೈಗಾರಿಕೆವಾರು ಮಾಹಿತಿ ನೀಡುವುದು)